(2)

**ಕರ್ನಾಟಕ ಸರ್ಕಾರ**

ತುರ್ತು

ಸಂಖ್ಯೆ: ಡಿಟಿಇ 07 ಎಂಎಸ್‌ಸಿ 2020 / 389

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ತಾಂತ್ರಿಕ ಶಿಕ್ಷಣ ಭವನ
ಅರಮನೆ ರಸ್ತೆ, ಬೆಂಗಳೂರು – 01.
ದಿ:06-10-2020

**ಸುತ್ತೋಲೆ**

ವಿಷಯ: ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಹಾಗೂ ಅಧೀನ ಸಂಸ್ಥೆಗಳಿಗೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಹೊರಗುತ್ತಿಗೆ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-ಡಿ ಸಿಬ್ಬಂದಿಗಳ ವೇತನ ಪಾವತಿ ಕುರಿತು.

ಉಲ್ಲೇಖ: ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಆದೇಶ ಸಂಖ್ಯೆ: ಡಿಟಿಇ 42 ಇಎಸ್‌ಟಿ(3)2017 ದಿನಾಂಕ:21.07.2018

* - * - * - *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಕಛೇರಿಯ ಹಾಗೂ ಕಾರ್ಯಾಗಾರದಲ್ಲಿನ ಗ್ರೂಪ್ ಡಿ ಹುದ್ದೆಗಳಿಗೆ ಎದುರಾಗಿ ಹೊರ ಗುತ್ತಿಗೆ ಮೇರೆಗೆ, ಸೇವೆ ಒದಗಿಸಲು ಮ ಆಬ್ಜೆಕ್ಟ್ ಟೆಕ್ನಾಲಜೀಸ್, ಬೆಂಗಳೂರು ಮತ್ತು ಮ ಮಾತಾ ಟೆಕ್ನಾಲಜೀಸ್, ಧಾರವಾಡ ಈ 02 ಸಂಸ್ಥೆಗಳಿಗೆ ಅನುಮೋದನೆ ನೀಡಲಾಗಿದೆ.

**ಮುಂದುವರೆದು ಏಪ್ರಿಲ್-2019 ರಿಂದ ಫೆಬ್ರವರಿ-2020ರ ವರೆಗೆ ಕಾರ್ಯನಿರ್ವಹಿಸಿದ ಹೊರ ಗುತ್ತಿಗೆ ಸಿಬ್ಬಂದಿಗಳ ವೇತನವನ್ನು ಮಾರ್ಚ್-2020ರ ಮಾಹೆಯಲ್ಲಿ ಮೆ. ಆಬ್ಜೆಕ್ಟ್ ಟೆಕ್ನಾಲಜೀಸ್, ಬೆಂಗಳೂರು ಮತ್ತು ಮೆ. ಮಾತಾ ಟೆಕ್ನಾಲಜೀಸ್, ಧಾರವಾಡ ಈ 02 ಸಂಸ್ಥೆಗಳಿಗೆ ಪಾವತಿ ಮಾಡಲಾಗಿರುತ್ತದೆ.**

ಆದರೆ ಕೆಲವು ಸಿಬ್ಬಂದಿಗಳಿಗೆ ಪಿಎಫ್, ಇಎಸ್‌ಐ/ವೇತನ ಪಾವತಿಯಾಗಿರುವುದಿಲ್ಲ ಎಂಬ ಮಾಹಿತಿ/ದಾಖಲೆಗಳು ನಿರ್ದೇಶನಾಲಯದಲ್ಲಿ ಸ್ವೀಕೃತಗೊಂಡಿರುತ್ತದೆ. ಆದ ಕಾರಣ ತಾವುಗಳು (ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರು) ತಮ್ಮ ಸಂಸ್ಥೆಗಳಲ್ಲಿ ಏಪ್ರಿಲ್-**2019 ರಿಂದ ಫೆಬ್ರವರಿ-2020ರ ವರೆಗಿನ ಅವಧಿಯಲ್ಲಿ ಕಾರ್ಯನಿರ್ವಹಿಸಿದ ಸಿಬ್ಬಂದಿಗಳಲ್ಲಿ ಪಿಎಫ್, ಇಎಸ್‌ಐ/ ವೇತನ ಪಾವತಿಯಾಗಿರದ ಸಿಬ್ಬಂದಿಗಳ ವಿವರ ಹಾಗೂ ಅಗತ್ಯ ದಾಖಲೆಗಳನ್ನು** ತಮ್ಮ ಸಂಸ್ಥೆಗೆ ಸೇವೆ ಒದಗಿಸಿದ ಏಜೆನ್ಸಿಗೆ (ಮೆ. ಆಬ್ಜೆಕ್ಟ್ ಟೆಕ್ನಾಲಜೀಸ್, ಬೆಂಗಳೂರು ಅಥವಾ ಮೆ. ಮಾತಾ ಟೆಕ್ನಾಲಜೀಸ್, ಧಾರವಾಡ) ಕಳುಹಿಸಿ ಕೂಡಲೇ ಪಾವತಿಮಾಡುವಂತೆ ಪತ್ರ ಬರೆದು ಪ್ರತಿಯನ್ನು ದಿ:15.10.2020ರೊಳಗೆ ನಿರ್ದೇಶನಾಲಯಕ್ಕೆ ಕಳುಹಿಸುವಂತೆ ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

1) ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನದ ಎಲ್ಲಾ ಸರ್ಕಾರಿ/ ಇಂಜಿನಿಯರಿಂಗ್ ಕಾಲೇಜುಗಳು/ ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರುಗಳ ಮುಂದಿನ ಸೂಕ್ತ ಕ್ರಮಕ್ಕಾಗಿ.

2) ಇ-ಆಡಳಿತ ಘಟಕಕ್ಕೆ ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಚುರಪಡಿಸುವುದು.